ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಗುಂಡ್ಲುಪೇಟೆ

**ಸಿ.ಸಿ. ಸಂಖ್ಯೆ: 927/2025**

ಫ್ರಾಸಾ – 7

ಚಾಸಾ – 8

**ಸಾಕ್ಷಿಯು ದಿಃ 17.03.2026 ರಂದು ನ್ಯಾಯಾಲಯದಲ್ಲಿ ಹಾಜರಿದ್ದು ಪ್ರಮಾಣ ವಚನ ಭೋಧಿಸಲಾಯಿತು.**

| | | |
|---|---|---|
| ಹೆಸರು | : | ಜಿ. ರಮೇಶ |
| ತಂದೆಯ ಹೆಸರು | : | ಗೋಪಾಲನಾಯಕ |
| ವಯಸ್ಸು | : | 51 ವರ್ಷ |
| ವೃತ್ತಿ | : | ಹೆಚ್.ಸಿ |
| ವಾಸಸ್ಥಳ | : | ತೆರಕಣಾಂಬಿ |

**ಮುಖ್ಯ ವಿಚಾರಣೆ :ಮಾನ್ಯ ಎಪಿಪಿ ರವರಿಂದ :–**

2017 ರಿಂದ 2022 ರವರೆಗೆ ಗುಂಡ್ಲುಪೇಟೆ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿಃ 15.01.2021 ರಂದು ಸಂಜೆ 7.00 ಗಂಟೆ ಸಮಯದಲ್ಲಿ ಚಾಸಾ 1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ಸಂಖ್ಯೆ 14/2021 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ ಎಂದು ಸಾಕ್ಷಿಯು ನಿಪಿ 1 ದೂರಿನಲ್ಲಿ ತಮ್ಮ ಸಹಿ ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ

1(ಎ) ಎಂದು ಗುರ್ತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ 5 ಎಂದು ಗುರ್ತಿಸಲಾಯಿತು. ಅದೇ ದಿನ ರಂದು ಚಾಸಾ 2 ರವರ ಗಾಯದ ಪ್ರಮಾಣ ಪತ್ರವನ್ನು ಗುಂಡ್ಲುಪೇಟೆ ಸಾರ್ವಜನಿಕ ಆಸ್ಪತ್ರೆಯಿಂದ ಪಡೆದುಕೊಂಡಿರುತ್ತೇನೆ ಎಂದು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿಪಿ 6 ಎಂದು, ಸಾಕ್ಷಿಯ ಸಹಿಯನ್ನು ನಿಪಿ 6(ಎ) ಎಂದು ಗುರ್ತಿಸಲಾಯಿತು.

3. ದಿಃ 16.01.2021 ರಂದು ಚಾಸಾ 1 ತೋರಿಸಿದ ಕೃತ್ಯ ಸ್ಥಳಕ್ಕೆ ಭೇಟಿ ನೀಡಿ ಚಾಸಾ 5 ಮತ್ತು 6 ರವರನ್ನು ಬರಮಾಡಿಕೊಂಡಿ ವಿಷಯ ತಿಳಿಸಿ ಅವರು ಒಪ್ಪಿದ ಮೇರೆಗೆ ಮಧ್ಯಾಹ್ನ 2.15 ರಿಂದ 3.00 ಗಂಟೆಯವರೆಗೆ ಪಂಚನಾಮೆ ಸಾಕ್ಷಿಗಳ ಸಮಕ್ಷಮ ನಿಪಿ 2 ರಂತೆ ಸ್ಥಳ ಪಂಚನಾಮೆ ಕ್ರಮ ಜರುಗಿಸಿ ಕೃತ್ಯಕ್ಕೆ ಬಳಸಿದ ಮುದ್ದೆ ಮಾಲು 1 ದೊಣ್ಣೆಯನ್ನು ಅಮಾನತ್ತು ಪಡಿಸಿಕೊಂಡಿರುತ್ತೇನೆ ಎಂದು ಸಾಕ್ಷಿ ಮುದ್ದೆ ಮಾಲು 1ನ್ನು ನೋಡಿ ಗುರುತಿಸಿರುತ್ತಾರೆ. ಅದೇ ದಿನ ನಂತರ ಠಾಣೆಗೆ ಬಂದು ಮು.ಮಾ ಗಳನ್ನು ಠಾಣಾ ಮಾಲುಪಟ್ಟಿಯಲ್ಲಿ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿಯು ನಿಪಿ 2 ರಲ್ಲಿ ತಮ್ಮ ಸಹಿ ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ 2(ಸಿ) ಎಂದು ಗುರ್ತಿಸಲಾಯಿತು. ಅದೇ ದಿನ ಚಾಸಾ 3 ಮತ್ತು 4 ರವರ ಹೇಳಿಕೆ ದಾಖಲಿಸಿರುತ್ತೇನೆ.

4. ದಿಃ 06.04.2021 ರಂದು ಚಾಸಾ 2 ರವರ ಹೇಳಿಕೆಯನ್ನು ದಂಡ ಪ್ರಕ್ರಿಯಾ ಸಂಹಿತೆ ಕಲಂ 164 ರ ಅಡಿಯಲ್ಲಿ ದಾಖಲಿಸಲು ಮಪಿಸಿ 570 ರವರ ಮೂಲಕ ನ್ಯಾಯಿಕ ದಂಡಾಧಿಕಾರಿಗಳ ಮುಂದೆ ಹಾಜರುಪಡಿಸಿರುತ್ತೇನೆ ಮತ್ತು ಅದರ ಪ್ರತಿಯನ್ನು ಪಡೆದಿರುತ್ತೇನೆ ಎಂದು ಸಾಕ್ಷಿಯು ನಿಪಿ 3 ಹೇಳಿಕೆಯನ್ನು ನೋಡಿ ಗುರುತಿಸಿರುತ್ತಾರೆ. ದಿಃ 12.10.2021 ರಂದು ಆದ ಜಾಮೀನು ಆದೇಶವನ್ನು ಪಡೆದು ಆರೋಪಿಗಳು ಠಾಣೆಗೆ ಹಾಜರಾದ ಮೇರೆಗೆ ದಸ್ತಗಿರಿ ಕ್ರಮ ಜರುಗಿಸಿ ಜಾಮೀನಿನ ಮೇಲೆ ಬಿಟ್ಟಿರುತ್ತೇನೆ ಎಂದು ಸಾಕ್ಷಿಯು 1ನೇ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ. 2ನೇ ಆರೋಪಿ ಗೈರು ಹಾಜರಿದ್ದು ಗುರ್ತಿಸುವಿಕೆಯ ವಿಚಾರದಲ್ಲಿ ತಕರಾರು ಇಲ್ಲ ಎಂದು ನುಡಿದ ಕಾರಣ ವಿನಾಯಿತಿ ಅರ್ಜಿಯನ್ನು ಪುರಸ್ಕರಿಸಲಾಯಿತು. ತನಿಖೆ ಪೂರ್ಣಗೊಂಡಿದ್ದು ಆರೋಪಿಗಳ ವಿರುದ್ಧ ಆರೋಪ ಸಾಬಿತಾದ್ದರಿಂದ ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತೇನೆ.

**ಪಾಟೀ ಸವಾಲು :– ಆರೋಪಿಗಳ ಪರ ವಕೀಲರಿಂದ**

ಚಾಸಾ 1 ರವರು ಯಾವುದೇ ದೂರು ನೀಡಿಲ್ಲ ಎಂದರೆ ಸರಿಯಲ್ಲ. ಸ್ಥಳದಲ್ಲಿ ಪಂಚನಾಮೆ ಮಾಡಿ ಮುದ್ದೆ ಮಾಲು 1ನ್ನು ವಶಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಈ ಕೇಸಿಗೋಸ್ಕರ ಗಾಯದ ಪ್ರಮಾಣ ಪತ್ರವನ್ನು ಸೃಷ್ಟಿಸಲಾಗಿದೆ ಎಂದರೆ ಸರಿಯಲ್ಲ. ಯಾವುದೇ ಸಾಕ್ಷಿದಾರರ ಹೇಳಿಕೆ ದಾಖಲಿಸಿಲ್ಲ ಎಂದರೆ ಸರಿಯಲ್ಲ. ಆರೋಪಿಗಳ ವಿರುದ್ಧ ಆರೋಪ ಸಾಬಿತಾಗದೇ ಇದ್ದರು ಸುಳ್ಳು ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

(ಶ್ರೀ. ದೀಪು ಎಂ.ಟಿ.)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಗುಂಡ್ಲುಪೇಟೆ